# ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
# KARNATAKA LEGISLATIVE ASSEMBLY RESEARCH AND REFERENCE BRANCH

## ಪತ್ರಿಕಾ ತುಣುಕುಗಳು
## PAPER CLIPPINGS

ಇಲಾಖೆ / ವಿಷಯ : DEPARTMENT / SUBJECT:

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯವಾಣಿ ದಿನಾಂಕ : DATE :

# ಸ್ಪೀಕರ್ ವಿರುದ ಹಕ್ಕುಚ್ಯುತಿ ಸದ್ಯಕ್ಕಿಲ್ಲ: ಸಮಿತಿ

**ಬೆಂಗಳೂರು:** ಸ್ಪೀಕರ್ ವಿರುದ್ಧ ಹಕ್ಕುಚ್ಯುತಿ ಮಂಡನೆಗೆ ಮುಂದಾಗಿದ್ದ ಸಾರ್ವಜನಿಕ ಲೆಕ್ಕಪತ್ರ ಸಮಿತಿ ತನಿಖೆ ಸದ್ಯಕ್ಕೆ ಹಕ್ಕುಚ್ಯುತಿ ಮಂಡಿಸದಿರಲು ನಿರ್ಧರಿಸಿದೆ. ಸ್ಪೀಕರ್ ಜತೆ ಈ ಸಂಬಂಧ ಸಭೆ ನಡೆಸಿ ಮುಂದೆ ನಿರ್ಧಾರ ಕೈಗೊಳ್ಳಲು ಮಂಗಳವಾರ ನಡೆದ ಸಮಿತಿ ಸಭೆ ನಿರ್ಧರಿಸಿದೆ.

ಕರೋನಾ ವೈದ್ಯಕೀಯ ಉಪಕರಣಗಳ ಖರೀದಿ ಅವ್ಯವಹಾರ ಸಂಬಂಧ ಸ್ಥಳ ಪರಿಶೀಲನೆಗೆ ತಡೆ ನೀಡಿದ ಹಿನ್ನೆಲೆಯಲ್ಲಿ ಸಮಿತಿ ಅಧ್ಯಕ್ಷ ಎಚ್.ಕೆ.ಪಾಟೀಲ್ ನೇತೃತ್ವದಲ್ಲಿ ಸಭೆ ನಡೆಯಿತು. ಸಭೆಯಲ್ಲಿ ಸ್ಪೀಕರ್ ವಿರುದ್ಧ ಹಕ್ಕುಚ್ಯುತಿಗೆ ಮುಂದಾಗುವುದು ಬೇಡ. ಮತ್ತೊಮ್ಮೆ ಸ್ಪೀಕರ್ ಗಮನಕ್ಕೆ ತಂದು ಪರಿಶೀಲಿಸಿ ಮುಂದಿನ ಕ್ರಮ ಜರುಗಿಸಲು ಬಿಜೆಪಿ ಸದಸ್ಯರು ಸೂಚಿಸಿದ್ದಾರೆ ಎನ್ನಲಾಗಿದ್ದು, ಈ ಹಿನ್ನೆಲೆಯಲ್ಲಿ ಸದ್ಯಕ್ಕೆ ಸ್ಪೀಕರ್ ವಿರುದ್ಧ ಹಕ್ಕುಚ್ಯುತಿ ಮಂಡಿಸದಿರಲು ಸಾರ್ವಜನಿಕ ಲೆಕ್ಕಪತ್ರ ಸಮಿತಿ ನಿರ್ಧರಿಸಿದೆ ಎನ್ನಲಾಗಿದೆ.



ಸಭೆ ಬಳಿಕ ಸುದ್ದಿಗಾರರೊಂದಿಗೆ ಎಚ್.ಕೆ.ಪಾಟೀಲ್ ಮಾತನಾಡಿ, ಸಮಿತಿಯ ಶಾಸನಸಭೆ ರಚಿಸಿ, ಸಮಿತಿಗೆ ಸದಸ್ಯರ ನಾಮಕರಣ ಮಾಡಲಾಗಿರುತ್ತದೆ. ಸ್ಪೀಕರ್ ವಿರುದ್ಧ ಹಕ್ಕುಚ್ಯುತಿ ಮಂಡನೆಗೂ ಮುನ್ನ ಸ್ಪೀಕರ್ ಜತೆ ಸಭೆ ನಡೆಸಿ, ಅವ್ಯವಹಾರ ಪರಿಶೀಲನೆಗೆ ಅವಕಾಶ ನೀಡುವಂತೆ ಮತ್ತೊಮ್ಮೆ ಮನವಿ ಮಾಡಲಾಗುವುದು. ಒಂದು ವೇಳೆ ಪರಿಶೀಲನೆಗೆ ಅವಕಾಶ ನೀಡದಿದ್ದರೆ ಮುಂದಿನ ಸಭೆಯಲ್ಲಿ ಹಕ್ಕುಚ್ಯುತಿ ಮಂಡನೆ ನಿರ್ಧಾರದ ಬಗ್ಗೆ ಚಿಂತನೆ ನಡೆಸಲಾಗುವುದು ಎಂದರು.

ಕಳೆದ ಮೇ 19ರಂದು ಸಮಿತಿ ಸಭೆ ನಡೆಸಿ, ಉಪಕರಣಗಳ ಖರೀದಿ ಪರಿಶೀಲನೆಗೆ ಮುಂದಾಗಿದ್ದೆವು. ಅವ್ಯವಹಾರ ಆರೋಪದ ಬಗ್ಗೆ ಪರಿಶೀಲನೆಗೆ ನಿರ್ಧರಿಸಿದ್ದೆವು. ಆದರೆ ನಮ್ಮ ಪರಿಶೀಲನೆಗೆ ತಡೆ ಬಿದ್ದಿತ್ತು. ಸಭಾಧ್ಯಕ್ಷರ ಆದೇಶದ ಮೇರೆಗೆ ನೋಟಿಫಿಕೇಶನ್ ಪ್ರಕಟಗೊಂಡಿತ್ತು. ನಂತರ ತಡೆಯನ್ನು ಪ್ರಶ್ನಿಸಿ ಸ್ಪೀಕರ್‌ಗೆ ಪತ್ರವನ್ನು ಬರೆದ ಪರಿಶೀಲನೆಗೆ ಅವಕಾಶ ಕೋರಿದ್ದೆವು. ಹೀಗಾಗಿ ಮತ್ತೆ ಸಮಿತಿ ಸಭೆ ನಡೆಸಿದ್ದೇವೆ. ತಡೆಯನ್ನು ತೆಗೆದು, ಪರಿಶೀಲನೆಗೆ ಅವಕಾಶ ನೀಡುವಂತೆ ಸ್ಪೀಕರ್‌ಗೆ ಮತ್ತೊಂದು ಪತ್ರವನ್ನು ಬರೆಯುವಂತೆ ಇಂದಿನ ಸಭೆಯಲ್ಲಿ ನಿರ್ಧಾರವಾಗಿದೆ ಎಂದರು.

ಸಭೆಯಲ್ಲಿ ಶಾಸಕರಾದ ಉಮೇಶ ಕತ್ತಿ, ಮುರುಗೇಶ ನಿರಾಣಿ, ರವಿ ಸುಬ್ರಮಣ್ಯ, ನಡಹಳ್ಳಿ, ಪಿ ರಾಜು, ನಾರಾಯಣಸ್ವಾಮಿ, ಎ.ಟಿ. ರಾಮಸ್ವಾಮಿ, ಕೆ.ಜಿ.ಬೋಪಯ್ಯ, ಸಿ.ಎಂ. ಇಬ್ರಾಹಿಂ, ರಮೇಶ ಕುಮಾರ, ನಾಗೇಶ್ ಸೇರಿದಂತೆ ಮತ್ತಿತರರು ಭಾಗವಹಿಸಿದ್ದರು.